**1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.ನ್ಯಾಯಾಲಯ, ಮುಳಬಾಗಿಲು**

**ಸಿಸಿ. ನಂಬರ್ 16/2024**

ಫ್ರಾ.ಸಾಃ 4

ಚಾಸಾಃ 5

**ದಿನಾಂಕಃ02.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು**.

| | |
|---|---|
| ಹೆಸರು | : ಶ್ರೀ ಏಜಾಜ್ |
| ತಂದೆಯ ಹೆಸರು | :ಅಮೀರ್ ಪಾಷ |
| ವಯಸ್ಸು | : 28 ವರ್ಷ |
| ಕೆಲಸ | : ವ್ಯವಸಾಯ |
| ವಾಸ ಸ್ಥಳ | : ಸಿ. ಗುಂಡ್ಲಹಳ್ಳಿ ಗ್ರಾಮ |

**ಮುಖ್ಯ ವಿಚಾರಣೆಃ ಮಾನ್ಯ ಸ. ಸ. ಅ. ರವರಿಂದಃ**

ಈ ಪ್ರಕರಣದ ಬಗ್ಗೆ ನನಗೆ ಏನೂ ಗೊತ್ತಿಲ್ಲ. ಚಾಸಾ 1 ಮತ್ತು 2 ರವರು ಗೊತ್ತಿಲ್ಲ. ನನ್ನ ಸಮಕ್ಷಮ ಮಹಜರ್ ಮಾಡಿಲ್ಲ ಮತ್ತು ಯಾವುದೇ ಸ್ವತ್ತನ್ನು ವಶಪಡಿಸಿಕೊಂಡಿಲ್ಲ. ಪೋಲೀಸರು ಒಂದು ದಾಖಲೆಗೆ ನನ್ನ ಸಹಿ ಪಡೆದಿರುತ್ತಾರೆ. ಯಾವ ವಿಚಾರಕ್ಕೆ ಎಂದು ಗೊತ್ತಿಲ್ಲ. ಆ ದಾಖಲೆಯಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಮಹಜರ್ ಅನ್ನು ತೋರಿಸಲಾಗಿ ಅದರಲ್ಲಿನ ತಮ್ಮ ಸಹಿಯನ್ನು ಗುರುತಿಸಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ 2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ2(ಬಿ) ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ. ಅ ರವರು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಮಾನ್ಯ ಸ.ಸ.ಅ ರವರಿಂದಃ**

ದಿಃ 04.01.2023 ರಂದು ಪೋಲೀಸರು ಅಪಘಾತ ಸ್ಥಳದಲ್ಲಿ ನನ್ನ ಮತ್ತು ಚಾಸಾ 4 ರವರ ಸಮಕ್ಷಮ ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ ನಿಪಿ 2 ರಂತೆ ಬೆಳಿಗ್ಗೆ 9.00 ರಿಂದ 10.00 ರವರೆಗೆ ಮಹಜರ್ ಮಾಡಿ ಅಪಘಾತಕ್ಕೆ ಒಳಗಾದ ಎರಡು ವಾಹನಗಳನ್ನು

ಅಮಾನತ್ತುಪಡಿಸಿಕೊಂಡು ಸ್ಥಳದಲ್ಲಿ ನನ್ನ ಸಹಿ ಪಡದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ**

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.

ಓ.ಹೇ.ಕೇ. ಸ. ಇದೆ

ಸಹಿ/–
(ಶ್ರೀಮತಿ ರೋಹಿಣಿ. ಡಿ)
1 ನೇ ಅಪರ ಸಿ.ಜೆ ಮತ್ತು ಜೆಎಂಎಫ್ ಸಿ
ಮುಳಬಾಗಿಲು